1071 ಶ್ರೀ ಶಂಕರಪಾಟೀಲ ಮುನೇನಕೊಪ್ಪ : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿ ಸಂಖ್ಯೆ:28ರ ಕಿ.ಮೀ 100.500 ರಿಂದ 119.08ರವರೆಗೆ ಒಟ್ಟು 15,060 ಕಿ.ಮೀವರೆಗೆ ರಸ್ತೆಯು ಹಾಳಾಗಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ರಸ್ತೆಯನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಇ) ಈ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು;

ಈ) ಈ ಕಾಮಗಾರಿಗೆ ತಗಲುವ ಅಂದಾಜು ವೆಚ್ಚ ಎಷ್ಟು? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು);

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಆ) ಇ) ಮತ್ತು ಈ)

ಈ ರಸ್ತೆಯ ಕೆಲವು ಭಾಗಗಳು ಹಾಳಾಗಿದ್ದು, ರಸ್ತೆಯ ಸಂಪೂರ್ಣ ಅಭಿವೃದ್ಧಿಗೆ ಒಟ್ಟು ಸುಮಾರು ರೂ.600.00 ಲಕ್ಷಗಳ ಅನುದಾನದ ಅಗತ್ಯತೆ ಇದೆ.

ಈ ರಸ್ತೆಯ ಕಿ.ಮೀ 115.88ರಿಂದ 119.08 ರವರೆಗಿನ ಅಭಿವೃದ್ಧಿ ಕಾಮಗಾರಿಯನ್ನು 2008–09ನೇ ಸಾಲಿನ ಕೇಂದ್ರ ರಸ್ತೆ ನಿಧಿ ಯೋಜನೆ ಅಡಿ ರೂ.200.00 ಲಕ್ಷಗಳ ಅಂದಾಜಿನಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ.

ರಸ್ತೆಯ ಕಿ.ಮೀ 100.50 ರಿಂದ 103.25 ರವರೆಗಿನ ರಸ್ತೆ ಅಭಿವೃದ್ಧಿಯನ್ನು 2009–10ನೇ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನಾಧರಿಸಿ ಕೈಗೆತ್ತಿಕೊಳ್ಳಲಾಗುವುದು.

ವಿದುರಾಶ್ವತ್ಥ ದೇವಾಲಯವನ್ನು ಪ್ರವಾಸೋದ್ಯಮ ಕೇಂದ್ರವಾಗಿ ಮಾಡುವುದು

754 ಶ್ರೀ ಶಿವಶಂಕರರೆಡ್ಡಿ ಎನ್.ಹೆಚ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನ ವಿದುರಾಶ್ವತ್ಥ ದೇವಾಲಯವು ಪ್ರಖ್ಯಾತವಾದ ದೇವಾಲಯವಾಗಿದ್ದು, ಈ ದೇವಾಲಯಕ್ಕೆ ಪ್ರತಿನಿತ್ಯ ಭಕ್ತಧಿಗಳು ಬೇರೆ ಬೇರೆ ಜಿಲ್ಲೆಗಳಿಂದ, ರಾಜ್ಯಗಳಿಂದ ಪೂಜಾ ಕಾರ್ಯಕ್ಕೆ ಆಗಮಿಸುತ್ತಿದ್ದು,